**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ:25:ಸುತ್ತೋಲೆ:ಆಯವ್ಯಯ:2018-19

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:04.04.2019.

**ಸುತ್ತೋಲೆ**

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಹಿಂದಿನ ಸಾಲಿನ ಗೌರವ ಧನ ಬಾಕಿ ಪಾವತಿ ಕುರಿತು.

ಉಲ್ಲೇಖ: 1. ಈ ಕಛೇರಿಯ ಅನುದಾನ ಬಿಡುಗಡೆ ಆದೇಶ ಸಂಖ್ಯೆ:ಕಾಶಿಇ/16/ ಅಉಗೌಧ/ಆಯವ್ಯಯ/2018-19, ದಿನಾಂಕ:20.11.2018.

2. ಈ ಕಛೇರಿಯ ಸಮಸಂಖ್ಯೆಯ ಸುತ್ತೋಲೆ ದಿನಾಂಕ:07.01.2019.

****

2018-19ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಿರುವ ಅತಿಥಿ ಉಪನ್ಯಾಸಕರುಗಳಿಗೆ ಜನವರಿ-2019ರವರೆಗೆ (ಭಾಗಶ:) EMIS Report ಪ್ರಕಾರ ಗೌರವ ಧನ ಪಾವತಿಗಾಗಿ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

ಮುಂದುವರೆದು ಈ ಕಛೇರಿಯ ಉಲ್ಲೇಖ(1)ರ ಆದೇಶದಲ್ಲಿ 2018-19ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದಲ್ಲಿ ಉಳಿಕೆ ಇದ್ದಲ್ಲಿ ಸದರಿ ಅನುದಾನವನ್ನು ಹಿಂದಿನ ಸಾಲಿನ ಬಾಕಿ ಪಾವತಿಸಲು ಅನುಮತಿಯನ್ನು ನೀಡಲಾಗಿರುತ್ತದೆ. ಉಲ್ಲೇಖ (2)ರ ಪತ್ರದನ್ವಯ ಹಿಂದಿನ ಬಾಕಿ ಪಾವತಿಗೆ ಕ್ರಮವಹಿಸಿದ ನಂತರ ಇನ್ನೂ ಹಿಂದಿನ ಸಾಲಿನ ಗೌರವಧನಬಾಕಿ ಉಳಿದಿದ್ದಲ್ಲಿ ಸದರಿ ಮಾಹಿತಿಗಳು ಕಾಲೇಜುಗಳಿಂದ ಸ್ವೀಕೃತವಾದ ನಂತರ ಕಾಲೇಜುಗಳು ಕೋರಿರುವ ಬಾಕಿಯ ಅವಧಿಗೆ ಈ ಹಿಂದೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ ಅಥವಾ ಇಲ್ಲವೇ ಎಂಬುದರ ಬಗ್ಗೆ ಪರಿಶೀಲಿಸಿ ಅನುದಾನ ಬಿಡುಗಡೆ ಮಾಡಲಾಗಿದ್ದರೂ ಮತ್ತೆ ಅನುದಾನ ಕೋರಿದ್ದಲ್ಲಿ ಈ ಬಗ್ಗೆ ವಿವರಣೆಯನ್ನು ಹಾಗೂ ಹಿಂದಿನ ಸಾಲಿನ ಬಾಕಿ ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ಕಾಲೇಜುಗಳಿಂದ ಪಡೆದು ತಮ್ಮ ಅಭಿಪ್ರಾಯದೊಂದಿಗೆ ದೃಢೀಕೃತ ಮಾಹಿತಿಯನ್ನು ಸಲ್ಲಿಸುವಂತೆ 06 ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಸೂಚಿಸಲಾಗಿತ್ತು. ಆದರೆ ಕೋರಿರುವ ಮಾಹಿತಿಯು ಇದುವರೆವಿಗೂ ಸ್ವೀಕೃತಗೊಂಡಿರುವುದಿಲ್ಲ.

ಪ್ರಸ್ತುತ ಹಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಂದ ಹಿಂದಿನ ಬಾಕಿಗೆ ಸಂಬಂಧಪಟ್ಟಂತೆ ಮೌಖಿಕವಾಗಿ ಮಾಹಿತಿಯನ್ನು ನೀಡುತ್ತಿದ್ದು, ದಾಖಲೆಗಳೊಂದಿಗೆ ಮಾಹಿತಿ ನೀಡದಿರುವುದು ವಿಷಾದನೀಯ. ಆದ್ದರಿಂದ 2015-16 ರಿಂದ 2017-18ನೇ ಶೈಕ್ಷಣಿಕ ಸಾಲುಗಳಲ್ಲಿ ಗೌರವಧನ ಪಾವತಿಗೆ ಸಂಬಂಧಿಸಿದಂತೆ ಬಾಕಿಯಿದ್ದಲ್ಲಿ ಮಾಹೆವಾರು ಈ ಕೆಳಕಂಡ ನಮೂನೆಯಲ್ಲಿ ಭರ್ತಿ ಮಾಡಿ ತುರ್ತಾಗಿ ಹಾರ್ಡ್ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಹಾಗೂ ಸಾಫ್ಟ್ ಪ್ರತಿಯನ್ನು ಇ-ಮೇಲ್ ವಿಳಾಸ dcebang.budget@gmail.com ಗೆ ಸಲ್ಲಿಸಲು ಸೂಚಿಸಿದೆ.

**ನಮೂನೆ**

| ಕ್ರ.ಸಂ. | ಕಾಲೇಜಿನ ಹೆಸರು | ಶೈಕ್ಷಣಿಕ ವರ್ಷ | ಅತಿಥಿ ಉಪನ್ಯಾಸಕರ ಸಂಖ್ಯೆ | ಬಾಕಿ ಪಾವತಿಗೆ ಬೇಕಾಗಿರುವ ಗೌರವಧನದ ಮೊತ್ತ | ಬಾಕಿ ಪಾವತಿಯ ಕೋರಿಕೆಗೆ ಸ್ಪಷ್ಟ ವಿವರಣೆ |
|---|---|---|---|---|---|
| 1 | 2 | 3 | 4 | 5 | 6 |
| 1 | | 2015-16 | | | |
| 2 | | 2016-17 | | | |
| 3 | | 2017-18 | | | |

ಮಾಹಿತಿಯನ್ನು ಸಲ್ಲಿಸುವಾಗ ಸದರಿ ಅವಧಿಯ ಬಾಕಿಗೆ ಈಗಾಗಲೇ ಅನುದಾನ ಬಿಡುಗಡೆ ಮಾಡಿಲ್ಲದಿರುವ ಬಗ್ಗೆ ಖಚಿತಪಡಿಸಿಕೊಂಡು ನೀಡಿರುವ ಮಾಹಿತಿಯು ಸರಿಯಾಗಿರುವುದಾಗಿ ದೃಢೀಕರಿಸಿ ಸಲ್ಲಿಸತಕ್ಕದ್ದು.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು ಧಾರವಾಡ ಹಾಗೂ ಕಲಬುರಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,

ಪ್ರತಿಯನ್ನು :

1. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.
2. ಕಛೇರಿ ಪ್ರತಿ.

D:\Accounts Budjet\D Drive\2018-19\PUSHPA BUDGET - 2018-19\25-Circular-18-19.docx

Scanned with CamScanner